57

ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಎಸ್.ಎಲ್. ಭೋಜೆಗೌಡ ಮತ್ತು ಶ್ರೀ ಕೆ.ಎ ತಿಪ್ಪೇಸ್ವಾಮಿ ರವರ ನಿಯಮ 330 ರ ಸೂಚನಾ ಪತ್ರಕ್ಕೆ ಉತ್ತರಿಸುವ ಕುರಿತು.

ಪ್ರಶ್ನೆ

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯವರು ನಡೆಸುತ್ತಿರುವ ಎಸ್.ಎಸ್.ಎಲ್.ಸಿ ಪೂರ್ವ ಸಿದ್ಧತಾ ಪರೀಕ್ಷೆಯ ಶುಲ್ಕಗೆ ಸಂಬಂಧಿಸಿದಂತೆ ದಿನಾಂಕ:25.01.2023 ರ ಆದೇಶದಲ್ಲಿ ನಿಗಧಿಪಡಿಸಿರುವ ಪ್ರತಿ ವಿದ್ಯಾರ್ಥಿಗಳಿಗೆ 60 ರೂಪಾಯಿಗಳ ಶುಲ್ಕವನ್ನು ನಿಗಧಿಪಡಿಸಿರುವುದರಿಂದ, ಗ್ರಾಮೀಣಾ ಪ್ರದೇಶದ ಬಡ ವಿದ್ಯಾರ್ಥಿಗಳಿಗೆ ಈ ಆದೇಶದಿಂದ ತುಂಬಾ ತೊಂದರೆಯಾಗುತ್ತಿದೆ. ಈ ಹಿಂದೆ ಎಸ್.ಎಸ್.ಎಲ್.ಸಿ ಪೂರ್ವ ಸಿದ್ಧತಾ ಪರೀಕ್ಷೆಯನ್ನು ಶಾಲಾ ಆಡಳಿತ ಮಂಡಳಿಯವರು ಹಾಗೂ ಶಿಕ್ಷಕರ ಸಂಘಟಣೆಗಳ ಮುಖಾಂತರ ನಡೆಯುತ್ತಿದ್ದ, ಸಂದರ್ಭಗಳಲ್ಲಿ ಕಡಿಮೆ ಶುಲ್ಕವನ್ನು ತೆಗೆದುಕೊಳ್ಳಲಾಗುತ್ತಿತ್ತು. ಅದರಂತೆ ಈ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ನಿಗಧಿಪಡಿಸಿರುವ ಶುಲ್ಕವನ್ನು ಪುನರ್ ಪರಿಶೀಲಿಸಿ ಬಡ ವಿದ್ಯಾರ್ಥಿಗಳಿಗೆ ಅನುಕೂಲಕರವಾಗಲು ಕಡಿಮೆ ಮಾಡಬೇಕೆಂದು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರನ್ನು ಒತ್ತಾಯಿಸುತ್ತೇವೆ.

ಉತ್ತರ

ಸರ್ಕಾರದ ಆದೇಶ ಸಂಖ್ಯೆ:ಇಪಿ 197 ಎಸ್ಎಲ್‌ಬಿ 2021 ದಿನಾಂಕ:06.12.2021 ರಲ್ಲಿ 2021-22ನೇ ಸಾಲಿನ ಎಸ್.ಎಸ್.ಎಲ್.ಸಿ ಪೂರ್ವ ಸಿದ್ಧತಾ ಪರೀಕ್ಷೆಗೆ ಪ್ರತಿ ವಿದ್ಯಾರ್ಥಿಗೆ ರೂ.60/- ಶುಲ್ಕವನ್ನು ನಿಗಧಿಪಡಿಸಿದ್ದು, ಮಾರ್ಚ್/ಏಪ್ರಿಲ್-2022ರಲ್ಲಿ ನಡೆದ ಪೂರ್ವ ಸಿದ್ಧತಾ ಪರೀಕ್ಷೆಯಲ್ಲಿ ರೂ.60/-ರಂತೆ ಶುಲ್ಕವನ್ನು ಪಡೆದು ಪರೀಕ್ಷೆ ನಡೆಸಲಾಗಿರುತ್ತದೆ.

ಸದರಿ ಪರೀಕ್ಷೆಗೆ ಸಹ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದಲೇ ಪ್ರಶ್ನೆಪತ್ರಿಕೆಯನ್ನು ಸಿದ್ಧಪಡಿಸಿ ರಾಜ್ಯವ್ಯಾಪ್ತಿ ವಿತರಿಸಲಾಗಿರುತ್ತದೆ. ಪ್ರಸಕ್ತ ಸಾಲಿನಲ್ಲಿ ಮಂಡಲಿಯಿಂದ ಮಾದರಿ ಪ್ರಶ್ನೆಪತ್ರಿಕೆಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳ ಲಾಗಿನ್‌ಗೆ ಅಪ್‌ಲೋಡ್‌ಮಾಡಿ ಪೂರ್ವ ಸಿದ್ಧತಾ ಪರೀಕ್ಷೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಸಂಬಂಧ ಬಿಇಓ ಹಂತದಲ್ಲಿಯೇ ಮಾದರಿ ಪ್ರಶ್ನೆಪತ್ರಿಕೆಯಂತೆ ವಿಷಯವಾರು ಪ್ರಶ್ನೆಪತ್ರಿಕೆಯನ್ನು ಸಿದ್ಧಪಡಿಸಿಕೊಂಡು ಪರೀಕ್ಷಾ ಕಾರ್ಯವನ್ನು ನಡೆಸಲು ಸರ್ಕಾರದ ಆದೇಶ ಸಂಖ್ಯೆ:ಇಪಿ 197 ಎಸ್ಎಲ್‌ಬಿ 2021 ದಿನಾಂಕ:25.01.2023ರಲ್ಲಿ ಆದೇಶಿಸಲಾಗಿದೆ ಹಾಗೂ 2021-2022ನೇ ಸಾಲಿನಲ್ಲಿ ನಿಗಧಿಪಡಿಸಿದ ಶುಲ್ಕವನ್ನೇ ಮುಂದುವರೆಸಿದೆ.

ಇಪಿ 36 ಎಸ್ಎಲ್‌ಬಿ 2023

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.